ಅ) ಹುಬ್ಬಳ್ಳಿ-ಧಾರವಾಡ ಮಹಾನಗರಸಭೆಗೆ ಚುನಾಯಿತ ಮಂಡಳಿಯನ್ನು ರದ್ದು ಗೊಳಿಸಿದ ನಂತರ ಮಹಾನಗರಸಭೆಗೆ ನೇಮಿತವಾದ ಸ್ವತಂತ್ರವಾಗಿ ಕೆಲಸ ನಿರ್ವಹಿಸುವ ಆಡಳಿತಾಧಿಕಾರಿಗಳು ಇಲ್ಲದೇ ಇರುವುದರಿಂದ ಸಾರ್ವಜನಿಕ ಮತ್ತು ಆಡಳಿತಾತ್ಮಕ ಮಹತ್ವದ ನಿರ್ಣಯ ಕೈಗೊಳ್ಳುವಲ್ಲಿ ವಿಳಂಬವಾಗಿ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಚುನಾವಣೆ ಆಗುವವರೆಗೆ ಸಾರ್ವಜನಿಕ ಅನುಕೂಲ ಸಲುವಾಗಿ ಸ್ವತಂತ್ರವಾಗಿ ಕಾರ್ಯ ನಿರ್ವಹಿಸುವ ಆಡಳಿತಾಧಿಕಾರಿಗಳನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ, ಕಾಡಾ ಮತ್ತು ಹೈದ್ರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು) :-

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ವಿಷಯ :- ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯನ್ನು ಹುಬ್ಬಳ್ಳಿಗೆ ವರ್ಗಾಯಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2365 (2769)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :- ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಜೀವಿಶಾಸ್ತ್ರ ಮತ್ತು ಪರಿಸರ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯನ್ನು ಹುಬ್ಬಳ್ಳಿಗೆ ವರ್ಗಾಯಿಸುವ ಕುರಿತು ಸರ್ಕಾರದವರು ನಿರ್ಧಾರ ತೆಗೆದುಕೊಂಡಿದೆಯೇ?

ಆ) ಹಾಗಿದ್ದಲ್ಲಿ ಈ ವಿಷಯವು ಯಾವ ಹಂತದಲ್ಲಿದೆ?

ಶ್ರೀ ಪಿ. ಸಿ. ಸಿದ್ದನಗೌಡರ್ (ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಜೀವಿಶಾಸ್ತ್ರ ಮತ್ತು ಪರಿಸರ ರಾಜ್ಯ ಸಚಿವರು) :-

ಸರ್ಕಾರವು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯನ್ನು ಬೆಂಗಳೂರಿನಿಂದ ಹುಬ್ಬಳ್ಳಿಗೆ ಸ್ಥಳಾಂತರಿಸಲು ತತ್ವಶ: ಒಪ್ಪಿ, ದಿನಾಂಕ : 11-09-1995 ರಂದು ಆದೇಶ ಹೊರಡಿಸಿದೆ.

ವಿಷಯ :- ಸಕ್ಕರೆ ನಿರ್ದೇಶನಾಲಯದ ಕಛೇರಿಯ ಸ್ಥಳಾಂತರ.

ಶ್ರೀ ಟಿ. ಬಿ. ಜಯಚಂದ್ರ (ಕಳ್ಳಂಬೆಳ್ಳ) :- ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಜೀವಿಶಾಸ್ತ್ರ ಮತ್ತು ಪರಿಸರ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?